ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	684
ಸದಸ್ಯರ ಹೆಸರು	:	ಶ್ರೀ. ಬಿ.ಜಿ.ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	25/09/2020
ಉತ್ತರಿಸುವ ಸಚಿವರು	:	**ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು**

	ಪ್ರಶ್ನೆ	ಉತ್ತರ
ಅ	ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇದೆ.
ಆ	ಇದ್ದಲ್ಲಿ, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಗುರುತಿಸಲಾಗಿದೆ; (ವಿವರ ನೀಡುವುದು)	ಕಲಬುರ್ಗಿ ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಯಡ್ರಾಮಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಿ ದಿನಾಂಕ:11/09/2020 ರಂದು ಪ್ರಾಥಮಿಕ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಯಾದಗಿರಿ ಜಿಲ್ಲೆಯ ವಡಗೇರಾ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.
ಇ	ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ನಿಗದಿ ಮಾಡಿರುವ ಮಾನದಂಡಗಳೇನು? (ವಿವರ ನೀಡುವುದು)	2011ರ ಜನಗಣತಿಯನ್ವಯ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆ ಅಧಿನಿಯಮ 1964 ಕಲಂ 349 ರನ್ವಯ ಈ ಕೆಳಕಂಡ ಮಾನದಂಡಗಳಿರುತ್ತದೆ: 1. ಗ್ರಾಮ ಪಂಚಾಯಿತಿ ಪ್ರದೇಶದ ಜನಸಂಖ್ಯೆಯು 10,000ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000ಕ್ಕೆ ಹೆಚ್ಚಿಲ್ಲದಂತಿರಬೇಕು. 2. ಅಂತಹ ಪ್ರದೇಶದ ಜನಸಂಖ್ಯೆಯು ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು. 3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50ಕ್ಕಿಂತ ಕಡಿಮೆ ಇಲ್ಲದಿರುವುದು. ಆದರೆ, ದಿನಾಂಕ 19/03/205ರಂದು ನಡೆದ ಸಚಿವ ಸಂಪುಟ ಸಭೆಯ ತೀರ್ಮಾನದಂತೆ 2011ರ ಜನಗಣತಿಯನ್ವಯ 15,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ:ನಅಇ 38 ಎಲ್‌ಸಿಕ್ಯೂ 2020.

(ಡಾ॥ ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು